Akashvani: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
20.06.2026: 7.35AM

ಮುಖ್ಯಾಂಶಗಳು :

1. ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಒಡಿಶಾ, ಪಶ್ಚಿಮ ಬಂಗಾಳಕ್ಕೆ ಭೇಟಿ: ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ, ಶಂಕುಸ್ಥಾಪನೆ
2. ಪ್ರಧಾನಿ ಅವರಿಂದ ಪಿಎಂ-ಕಿಸಾನ್ ಸಮ್ಮಾನ್ ಯೋಜನೆಯ ೨೩ನೇ ಕಂತಿನ ಹಣ ಇಂದು ಬಿಡುಗಡೆ
3. ೨೦೨೬-೨೭ರ ಅವಧಿಗೆ ಹಣಕಾಸು ಕ್ರಿಯಾ ಕಾರ್ಯಪಡೆಗೆ ಉಪಾಧ್ಯಕ್ಷರಾಗಿ ವಿವೇಕ್ ಅಗರ್‌ವಾಲ್ ಆಯ್ಕೆ
4. ಚೆನ್ನೈನಲ್ಲಿಂದು ಭಾರತ - ಅಫಘಾನಿಸ್ತಾನ ೩ನೇ ಏಕದಿನ ಕ್ರಿಕೆಟ್ ಪಂದ್ಯ; ಆತಿಥೇಯ ತಂಡಕ್ಕೆ ಕ್ಲೀನ್ ಸ್ವೀಪ್ ಗುರಿ
5. ಫಿಫಾ ವಿಶ್ವಕಪ್ ಫುಟ್ಬಾಲ್: ಮೆಕ್ಸಿಕೊ ನಂತರ ಅಮೆರಿಕ ನಾಕೌಟ್ ಹಂತಕ್ಕೆ ಮುನ್ನಡೆ

**********

ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಒಡಿಶಾ ಮತ್ತು ಪಶ್ಚಿಮ ಬಂಗಾಳಕ್ಕೆ ಭೇಟಿ ನೀಡಲಿದ್ದಾರೆ. ಒಡಿಶಾದಲ್ಲಿ, ರಾಷ್ಟ್ರಪತಿ ಅವರ ೬೮ನೇ ಹುಟ್ಟುಹಬ್ಬದ ಅಂಗವಾಗಿ ಅವರು ಮಯೂರ್ಭಂಜ್ ಜಿಲ್ಲೆಯ ಪಹಾದ್ ಪುರ ಗ್ರಾಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ. ರಾಷ್ಟ್ರಪತಿ ಮತ್ತು ಪ್ರಧಾನಿ ಮಯೂರ್ಭಂಜ್ ಜಿಲ್ಲೆಯ ಪಹಾದ್ ಪುರ ಗ್ರಾಮಕ್ಕೆ ಭೇಟಿ ನೀಡಲಿದ್ದಾರೆ ಮತ್ತು ಪವಿತ್ರ ತೋಪುಗಳಾದ ಸಂತಾಲಿ ಜಹೇರಾ ಮತ್ತು ಹೋ ಜಹೇರಾ, ಕೌಶಲ್ಯ ಕೇಂದ್ರ ಮತ್ತು ಪಹಾದ್ ಪುರ ಶಾಲೆಯಲ್ಲಿ ಪ್ರಾರ್ಥನೆ ಸಲ್ಲಿಸಲಿದ್ದಾರೆ. ನಂತರ, ಮೋಹನ್ ಚರಣ್ ಮಾಝಿ ನೇತೃತ್ವದ ರಾಜ್ಯ ಸರ್ಕಾರ ಎರಡು ವರ್ಷಗಳನ್ನು ಪೂರೈಸಿದ ಅಂಗವಾಗಿ ಮಯೂರ್ಭಂಜ್ ಜಿಲ್ಲೆಯ ರಾಯರಂಗಪುರದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಅವರು ೪೭ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು

ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಇಂಧನ, ಕೈಗಾರಿಕಾ ಮೂಲಸೌಕರ್ಯ, ರಸ್ತೆ ಸಂಪರ್ಕ, ಕುಡಿಯುವ ನೀರು, ಆರೋಗ್ಯ, ಶಿಕ್ಷಣ, ಪ್ರವಾಸೋದ್ಯಮ ಮತ್ತು ನೀರಾವರಿ ಸೇರಿದಂತೆ ಪ್ರಮುಖ ಕ್ಷೇತ್ರಗಳನ್ನು ಈ ಯೋಜನೆಗಳನ್ನು ಒಳಗೊಂಡಿದೆ. ಎರಡು ದಿನಗಳ ಪಶ್ಚಿಮ ಬಂಗಾಳ ಪ್ರವಾಸದ ವೇಳೆ ಪ್ರಧಾನಿ ಮೋದಿ, ಇಂದು ಹೂಗ್ಲಿ ಜಿಲ್ಲೆಯ ತಾರಕೇಶ್ವರದಲ್ಲಿ ಆಯೋಜಿಸಲಾಗಿರುವ ಪಶ್ಚಿಮ ಬಂಗಾಳ ದಿವಸ್ ಆಚರಣೆಯಲ್ಲಿ ಭಾಗವಹಿಸಲಿದ್ದಾರೆ. ಈ ವೇಳೆ ಅವರು, ಹಲವು ಅಭಿವೃದ್ಧಿ ಯೋಜನೆಗಳಿಗೆ ಚಾಲನೆ, ಲೋಕಾರ್ಪಣೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯ ೨೩ನೇ ಕಂತನ್ನು ಪ್ರಧಾನಿ ಬಿಡುಗಡೆ ಮಾಡಲಿದ್ದಾರೆ. ಇದರ ಅಡಿಯಲ್ಲಿ, ದೇಶಾದ್ಯಂತ ೯.೪೪ ಕೋಟಿ ರೈತರ ಬ್ಯಾಂಕ್ ಖಾತೆಗಳಿಗೆ ೧೮ ಸಾವಿರದ ೮೮೦ ಕೋಟಿ ರೂಪಾಯಿಗಳಿಗೂ ಹೆಚ್ಚು ಹಣವನ್ನು ನೇರವಾಗಿ ವರ್ಗಾಯಿಸಲಾಗುವುದು.ಪ್ರಧಾನಮಂತ್ರಿ ಅವರು ಪಶ್ಚಿಮ ಬಂಗಾಳದಲ್ಲಿ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ, ಡಿಜಿಟಲ್ ಕೃಷಿ ಅಭಿಯಾನದ ಭಾಗವಾಗಿ ಅಗ್ರಿ ಸ್ಟ್ಯಾಕ್, ನೈಸರ್ಗಿಕ ಕೃಷಿಯ ರಾಷ್ಟ್ರೀಯ ಅಭಿಯಾನ ಮತ್ತು ಪ್ರಧಾನ ಮಂತ್ರಿ ಧನ್-ಧನ್ಯ ಕೃಷಿ ಯೋಜನೆ ಸೇರಿದಂತೆ ಹಲವಾರು ಪ್ರಮುಖ ಕೇಂದ್ರ ಕೃಷಿ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ನಾಳೆ, ಪ್ರಧಾನಿ  ಅವರು ಕೋಲ್ಕತ್ತಾದಲ್ಲಿ ಬೆಳಗ್ಗೆ ೬:೩೦ ರ ಸುಮಾರಿಗೆ ೧೨ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಭಾಗವಹಿಸಲಿದ್ದಾರೆ. ಕೋಲ್ಕತ್ತಾದ ಶ್ಯಾಮ್ ಪ್ರಸಾದ್ ಮುಖರ್ಜಿ ಬಂದರಿನಲ್ಲಿ ದೇಶೀಯವಾಗಿ ವಿನ್ಯಾಸಗೊಳಿಸಿದ ಮತ್ತು ನಿರ್ಮಿಸಲಾದ ಮೂರು ನೌಕಾ  ಹಡಗುಗಳಾದ ಐಎನ್‌ಎಸ್ ದುನಾಗಿರಿ, ಐಎನ್‌ಎಸ್ ಸಂಶೋಧಕ್ ಮತ್ತು ಐಎನ್‌ಎಸ್ ಅಗ್ರಯ್ ಕಾರ್ಯಾರಂಭಕ್ಕೂ ಚಾಲನೆ ನೀಡಲಿದ್ದಾರೆ.

**********

ಯೋಗ ಭಾರತೀಯ ಸಂಸ್ಕೃತಿಯ ಅಮೂಲ್ಯ ಕೊಡುಗೆಗಳಲ್ಲಿ ಒಂದು. ಇದು ದೇಹ, ಮನಸ್ಸು ಮತ್ತು ಆತ್ಮದ ಸಮತೋಲನವನ್ನು ಸಾಧಿಸುವ ಪ್ರಾಚೀನ ಶಿಸ್ತಾಗಿದ್ದು, ವಿಶ್ವದಾದ್ಯಂತ ಅದರ ಮಹತ್ವವನ್ನು ಇತ್ತೀಚಿನ ದಿನಗಳಲ್ಲಿ ಎಲ್ಲರೂ ಅರಿಯತೊಡಗಿದ್ದಾರೆ. ೧೨ನೇ ಅಂತರಾಷ್ಟ್ರೀಯ ಯೋಗ ದಿನವನ್ನು ನಾಳೆ ಆಚರಿಸಲಾಗುತ್ತಿದ್ದು, ಈ ವರ್ಷದ ಮುಖ್ಯ ಕಾರ್ಯಕ್ರಮವು ಪಶ್ಚಿಮ

ಬಂಗಾಳದ ಕೋಲ್ಕತಾದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಜರುಗಲಿದೆ. ಈ ವರ್ಷದ ಅಂತರಾಷ್ಟ್ರೀಯ ಯೋಗ ದಿನವನ್ನು "ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ" ಎಂಬ ವಿಷಯದಡಿ ಆಚರಿಸಲಾಗುತ್ತಿದೆ. ಇದು ವಯಸ್ಸಾದಂತೆ ದೈಹಿಕ ಕ್ಷಮತೆ, ಸ್ವಾತಂತ್ರ್ಯ ಮತ್ತು ಸ್ವಾಸ್ಥ್ಯವನ್ನು ಕಾಪಾಡಿಕೊಳ್ಳಲು ಯೋಗದ ಮಹತ್ವವನ್ನು ಒತ್ತಿಹೇಳುತ್ತದೆ. ಭಾರತದಾದ್ಯಂತ ಸುಮಾರು ೨,೫೦೦ಕ್ಕೂ ಅಧಿಕ ಸ್ಥಳಗಳಲ್ಲಿ ಏಕಕಾಲಕ್ಕೆ ಯೋಗಾಭ್ಯಾಸ ನಡೆಯಲಿದ್ದು, ಕರ್ನಾಟಕದ ಐತಿಹಾಸಿಕ ತಾಣವಾದ ಹಂಪಿಯ ಆವರಣದಲ್ಲೂ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಸರಕಾರದ ವತಿಯಿಂದ, ಬೆಂಗಳೂರಿನ ವಿಧಾನಸೌಧದಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ.

**********

೨೦೨೬-೨೮ರ ಅವಧಿಗೆ ಹಣಕಾಸು ಕ್ರಿಯಾ ಕಾರ್ಯಪಡೆಯ ಮುಂದಿನ ಉಪಾಧ್ಯಕ್ಷರಾಗಿ ಹಿರಿಯ ಭಾರತೀಯ ಅಧಿಕಾರಿ ವಿವೇಕ್ ಅಗರ್‌ವಾಲ್ ಅವರನ್ನು ಆಯ್ಕೆ ಮಾಡಲಾಗಿದೆ. ಅವರು ಯುನೈಟೆಡ್ ಕಿಂಗ್‌ಡಮ್‌ನ  ಗೈಲ್ಸ್ ಥಾಮ್ಸನ್ ಅವರ ಉತ್ತರಾಧಿಕಾರಿಯಾಗಲಿದ್ದಾರೆ. ಪ್ರಸ್ತುತ ಸಂಸ್ಕೃತಿ ಸಚಿವಾಲಯದಲ್ಲಿ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿರುವ ಅಗರ್ವಾಲ್, ಈ ಹಿಂದೆ ಎಫ್‌ಎಟಿಎಫ್ ಗೆ ಭಾರತೀಯ ನಿಯೋಗದ ನೇತೃತ್ವ ವಹಿಸಿದ್ದರು ಮತ್ತು ಜಾಗತಿಕ ಅಕ್ರಮ ಹಣ ವರ್ಗಾವಣೆ ವಿರೋಧಿ ಮತ್ತು ಭಯೋತ್ಪಾದನಾ ಹಣಕಾಸು ನಿಗ್ರಹ ಸಂಸ್ಥೆಯೊಂದಿಗೆ ಭಾರತದ ತೊಡಗಿಸಿಕೊಳ್ಳುವಿಕೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.    ಜೂನ್ ೧೭ ರಿಂದ ೧೯ ರವರೆಗೆ ನಡೆದ ಎಫ್‌ಎಟಿಎಫ್ ಪ್ಲೀನರಿಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

**********

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಕೊಲ್ಹಾಪುರ ಮತ್ತು ಇಚಲ್ಕರಂಜಿಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಅವರು, ಮಹಾಲಕ್ಷ್ಮಿ ದೇವಾಲಯದ ಆವರಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಉದ್ಘಾಟಿಸಲಿದ್ದಾರೆ ಮತ್ತು ದೇವಾಲಯ ಪ್ರದೇಶದಲ್ಲಿ ಪಶ್ಚಿಮ ಮಹಾರಾಷ್ಟ್ರ ದೇವಾಲಯ ಅಭಿವೃದ್ಧಿ ಯೋಜನೆ ಅಡಿಯಲ್ಲಿ ಕೈಗೊಳ್ಳಲಾಗುತ್ತಿರುವ ಅಭಿವೃದ್ಧಿ ಯೋಜನೆಗಳನ್ನು ಪರಿಶೀಲಿಸಲಿದ್ದಾರೆ.ಕೊಲ್ಹಾಪುರದ ಪೊಲೀಸ್ ಪರೇಡ್ ಮೈದಾನದಲ್ಲಿ ಸಾರ್ವಜನಿಕ

ಸಭೆಯನ್ನುದ್ದೇಶಿಸಿ ಸಚಿವರು ಮಾತನಾಡಲಿದ್ದಾರೆ. ನಂತರ ಅವರು ಇಚಲ್ಕರಂಜಿಯಲ್ಲಿ ಜನತಾ ಸಹಕಾರಿ ಬ್ಯಾಂಕಿನ ನೂತನ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ ಮತ್ತು ಸಹಕಾರಿ ಸಕ್ಕರೆ ಕಾರ್ಖಾನೆಯ ಮರುನಾಮಕರಣ ಮತ್ತು ವಿಸ್ತರಣೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಕೇಂದ್ರ ಗೃಹ ಸಚಿವರು, ಇಚಲ್ಕರಂಜಿಯ ಕಲ್ಲಪ್ಪಣ್ಣ ಅವಡೆ ಜವಳಿ ಪಾರ್ಕ್ ಮೈದಾನದಲ್ಲಿ ರೈತರ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ.

**********

ದೇಶಾದ್ಯಂತ ನಾಳೆ ನಡೆಯಲಿರುವ ನೀಟ್-ಯುಜಿ ಮರುಪರೀಕ್ಷೆಯ ಮುನ್ನಾದಿನದಂದು ಟೆಲಿಗ್ರಾಮ್ ಆಪ್ ಅನ್ನು ತಾತ್ಕಾಲಿಕವಾಗಿ ನಿರ್ಬಂಧಿಸಿದ ಕೇಂದ್ರ ಸರ್ಕಾರದ ಆದೇಶವನ್ನು ದೆಹಲಿ ಉಚ್ಚನ್ಯಾಯಾಲಯ ಎತ್ತಿಹಿಡಿದಿದೆ. ಬೃಹತ್ ಪ್ರಮಾಣದ ಮಾಹಿತಿಯನ್ನು ಸ್ವಯಂಚಾಲಿತವಾಗಿ ಹರಡಲು ಈ ಆಪ್ ಅನುವು ಮಾಡಿಕೊಡುವುದರಿಂದ, ಪರೀಕ್ಷಾ ಅಕ್ರಮ ತಡೆಯಲು ಸರ್ಕಾರ ಕೈಗೊಂಡಿರುವ ಈ ಮುನ್ನೆಚ್ಚರಿಕೆ ಕ್ರಮ ಸೂಕ್ತವಾಗಿದೆ ಎಂದು ನ್ಯಾಯಾಲಯ ತಿಳಿಸಿದೆ.ನ್ಯಾಯಮೂರ್ತಿ ತೇಜಸ್ ಕರಿಯಾ ಅವರಿದ್ದ ರಜೆಕಾಲದ ಪೀಠ, ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ, ಕೇಂದ್ರ ಸರ್ಕಾರ ಕಾನೂನುಬದ್ಧವಾಗಿಯೇ ಈ ಕ್ರಮ ಕೈಗೊಂಡಿದೆ ಎಂದು ತಿಳಿಸಿದೆ. ಮಾಹಿತಿ ತಂತ್ರಜ್ಞಾನ ಕಾಯ್ದೆಯ ಸೆಕ್ಷನ್ ೬೯ಎ ಅಡಿಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಯಾವುದೇ ಆನ್‌ಲೈನ್ ವೇದಿಕೆಯನ್ನು ನಿರ್ಬಂಧಿಸುವ ಅಧಿಕಾರ ಸರ್ಕಾರಕ್ಕಿದೆ ಎಂದು ಪೀಠ ಸ್ಪಷ್ಟಪಡಿಸಿದೆ.

**********

ಭಾರತ ಮತ್ತು ಅಫ್ಘಾನಿಸ್ತಾನ ನಡುವಿನ ಮೂರನೇ ಹಾಗೂ ಅಂತಿಮ ಏಕದಿನ ಕ್ರಿಕೆಟ್ ಪಂದ್ಯ ಇಂದು ಮಧ್ಯಾಹ್ನ ಚೆನ್ನೈನ ಎಂಎ ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯಲಿದೆ. ಮಧ್ಯಾಹ್ನ ೧.೩೦ಕ್ಕೆ ಪಂದ್ಯ ಆರಂಭವಾಗಲಿದೆ. ಆತಿಥೇಯ ತಂಡವು ಈಗಾಗಲೇ ೨-೦ ಮುನ್ನಡೆಯೊಂದಿಗೆ ಸರಣಿಯನ್ನು ಭದ್ರಪಡಿಸಿಕೊಂಡಿದೆ ಮತ್ತು ಮೂರು ಪಂದ್ಯಗಳ ಸರಣಿಯನ್ನು ಕ್ಲೀನ್ ಸ್ವೀಪ್ ಪೂರ್ಣಗೊಳಿಸುವ ಗುರಿಯನ್ನು ಹೊಂದಿದೆ. ಏತನ್ಮಧ್ಯೆ, ವೇಗದ ಬೌಲರ್ ಹರ್ಷಿತ್

ರಾಣಾ ಮೊಣಕಾಲು ಗಾಯದಿಂದ ಚೇತರಿಸಿಕೊಂಡ ನಂತರ ಅಂತಿಮ ಏಕದಿನ ಪಂದ್ಯಕ್ಕೆ ಭಾರತ ತಂಡವನ್ನು ಸೇರಿಕೊಂಡಿದ್ದಾರೆ.

**********

೨೦೨೬ರ ಫಿಫಾ ವಿಶ್ವಕಪ್ ಫುಟ್ಬಾಲ್ ಟೂರ್ನಿಯಲ್ಲಿ ವಾಷಿಂಗ್ಟನ್‌ನ ಸಿಯಾಟಲ್ ಕ್ರೀಡಾಂಗಣದಲ್ಲಿ ನಡೆದ ಗ್ರೂಪ್ ಡಿ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡವನ್ನು ೨-೦ ಗೋಲುಗಳಿಂದ ಮಣಿಸಿದ ಅಮೆರಿಕ ನಾಕೌಟ್ ಹಂತಕ್ಕೆ ಪ್ರವೇಶಿಸಿದೆ. ಕ್ಯಾಮರೂನ್ ಬರ್ಗೆಸ್ ಅವರ ಉಡುಗೊರೆ ಗೋಲು ಮತ್ತು ಅಲೆಕ್ಸ್ ಫ್ರೀಮನ್ ಹೆಡರ್ ಮೂಲಕ ಗಳಿಸಿದ ಗೋಲಿನಿಂದ ಸಹ ಆತಿಥೇಯ ಅಮೆರಿಕ ಮೊದಲಾರ್ಧದಲ್ಲಿ ೨-೦ ಮುನ್ನಡೆ ಸಾಧಿಸಿತು. ತಮ್ಮ ಆರಂಭಿಕ ಪಂದ್ಯದಲ್ಲಿ ಪರಾಗ್ವೆ ವಿರುದ್ಧ ೪-೧ ಗೋಲುಗಳಿಂದ ಗೆದ್ದ ನಂತರ ಮೌರಿಸಿಯೊ ಪೊಚೆಟ್ಟಿನೊ ಅವರ ತಂಡವು ತಮ್ಮ ಪ್ರಬಲ ಫಾರ್ಮ್ ಅನ್ನು ಮುಂದುವರಿಸಿತು. ಎರಡು ಪಂದ್ಯಗಳಲ್ಲಿ ಎರಡು ಗೆಲುವುಗಳೊಂದಿಗೆ ಅಮೆರಿಕ ತಂಡವು, ಮೆಕ್ಸಿಕೊ ನಂತರ ನಾಕೌಟ್ ಸುತ್ತುಗಳಿಗೆ ಅರ್ಹತೆ ಪಡೆದ ಎರಡನೇ ತಂಡ ಎನಿಸಿದೆ. ಒಂದು ಪಂದ್ಯ ಬಾಕಿ ಇರುವಾಗ ಅಮೆರಿಕನ್ನರು ಗ್ರೂಪ್ ಹಂತದಿಂದ ವಿಶ್ವಕಪ್ ಅರ್ಹತೆ ಪಡೆದಿರುವುದು ಇದೇ ಮೊದಲು. ಈ ಗೆಲುವು ೯೬ ವರ್ಷಗಳಲ್ಲಿ ಅಮೆರಿಕ ತಂಡವು ಮೊದಲ ಬಾರಿಗೆ ಸತತವಾಗಿ ವಿಶ್ವಕಪ್ ಗೆಲುವುಗಳನ್ನು ಗುರುತಿಸಿದೆ.

**********